ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT: 10
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 19/10/20

## ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ: ಬಿಬಿಎಂಪಿ ಮಾಜಿ ಸದಸ್ಯರ ವಲಸೆ

# ಬಿಜೆಪಿಯತ್ತ ವಿಪಕ್ಷ ಮುಖಂಡರು

ಪ್ರಜಾವಾಣಿ ವಾರ್ತೆ 19-10-20

ಬೆಂಗಳೂರು: ಆರ್.ಆರ್. ನಗರ ಕ್ಷೇತ್ರಕ್ಕೆ ಚುನಾವಣೆ ನಡೆಯುತ್ತಿರುವ ಬೆನ್ನಲ್ಲೇ, ಕ್ಷೇತ್ರದಿಂದ ಕಾಂಗ್ರೆಸ್ ಮತ್ತು ಜೆಡಿಎಸ್‌ನಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದ ಹಲವು ಮುಖಂಡರು ಸಾಮೂಹಿಕವಾಗಿ ಬಿಜೆಪಿಗೆ ವಲಸೆ ಹೋಗಿದ್ದಾರೆ. ಮಾಜಿ ಮೇಯರ್ ನಾರಾಯಣಸ್ವಾಮಿ ಸೇರಿದಂತೆ 12 ಮುಖಂಡರು ಭಾನುವಾರ ಬಿಜೆಪಿ ಸೇರಿದರು.

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಉಪಸ್ಥಿತಿಯಲ್ಲಿ ಪಾಲಿಕೆ ಮಾಜಿ ಸದಸ್ಯರಾದ ಶ್ರೀನಿವಾಸಮೂರ್ತಿ, ಜಿ.ಕೆ. ವೆಂಕಟೇಶ್, ಆಶಾ ಸುರೇಶ್, ವೇಲು ನಾಯ್ಕರ್, ಮಂಜುಳಾ ನಾರಾಯಣಸ್ವಾಮಿ, ಸಿದ್ದೇಗೌಡ, ಮೋಹನ್‌ಕುಮಾರ್, ವೆಂಕಟೇಶ್ ಬಾಬು, ಗೋವಿಂದರಾಜು, ರಾಮಚಂದ್ರ, ನಗರಸಭೆಯ ಮಾಜಿ ಸದಸ್ಯ ಕಮಲೇಶ್ ಹಾಗೂ ನೂರಾರು ಕಾರ್ಯಕರ್ತರು ಬಿಜೆಪಿ ಸದಸ್ಯತ್ವ ಪಡೆದರು.

**ಡೈನಮೈಟ್ ಸಿಕ್ಕಿವೆ:** ಕಾಂಗ್ರೆಸ್, ಜೆಡಿಎಸ್ ಮುಖಂಡರನ್ನು ಪಕ್ಷಕ್ಕೆ ಸೇರಿಸಿಕೊಂಡ ಬಳಿಕ ಮಾತನಾಡಿದ ನಳಿನ್ ಕುಮಾರ್ ಕಟೀಲ್, 'ಕನಕಪುರ ಸೇರಿದಂತೆ ಎಲ್ಲೆಲ್ಲಿಂದಲೋ ಬಂದವರು ಆರ್.ಆರ್. ನಗರದಲ್ಲಿ ಗೂಂಡಾಗಿರಿಯ ರಾಜಕಾರಣ ಮಾಡಲು ಈ ಬಾರಿ ಬಿಡುವುದಿಲ್ಲ. ಸ್ವಾಮಿ, ನಿಮ್ಮ ಬಳಿ ಬಂಡೆ

ಜನತಂತ್ರದ ಹಬ್ಬ 2020

ಇರಬಹುದು. ಕಾಂಗ್ರೆಸ್‌ನಿಂದ ಬಂದ ಡೈನಮೈಟ್‌ಗಳು ನಮ್ಮ ಬಳಿ ಇವೆ. ಬಂಡೆಯನ್ನು ಪುಡಿ ಮಾಡಲಿವೆ' ಎಂದರು.

'ಕಾಂಗ್ರೆಸ್ ನಾಯಕರು ಈಗ ಟೀಕೆ, ಟಿಪ್ಪಣಿ ಮಾಡುತ್ತಿದ್ದಾರೆ. ತಿಹಾರ್ ಜೈಲಿನಲ್ಲಿದ್ದಾಗ ನೀವು ಇತಿಹಾಸ ಓದಿದಿರಾ? ಅಥವಾ ಇತಿಹಾಸ ಬರೆದಿರಾ? ಜೈಲಿಗೆ ಹೋಗುವಾಗ, ಬರುವಾಗ, ಕುಳಿತಾಗ, ನಿಂತಾಗ ಮೆರವಣಿಗೆ ಮಾಡುತ್ತೀರಿ. ನಿಮ್ಮನ್ನು ಮನೆಯಲ್ಲೇ ಕೂರಿಸಲು ಜನರು ತೀರ್ಮಾನಿಸಿದ್ದಾರೆ' ಎಂದು ಹೇಳಿದರು.

ಕಂದಾಯ ಸಚಿವ ಆರ್. ಅಶೋಕ ಮಾತನಾಡಿ, 'ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಮತ್ತು ಸಂಸದ ಡಿ.ಕೆ. ಸುರೇಶ್ ಅವರು ನಾವೇ ಅಭ್ಯರ್ಥಿಗಳೆಂದು ಪರಿಗಣಿಸಿ ಮತ ನೀಡಿ ಎಂದು ಮನವಿ ಮಾಡಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಯನ್ನು ಅವರೇ ಅವಮಾನಿಸುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಸುರೇಶ್ ಇಲ್ಲಿ ಕಡಿಮೆ ಮತ ಗಳಿಸಿದ್ದರು ಎಂಬುದು ಅವರಿಗೆ ನೆನಪಿರಲಿ' ಎಂದರು.

ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಅರವಿಂದ ಲಿಂಬಾವಳಿ, ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ, ಅಭ್ಯರ್ಥಿ ಮುನಿರತ್ನ, ವಿಭಾಗ ಪ್ರಭಾರಿ ಗೋಪಿನಾಥ ರೆಡ್ಡಿ, ಬೆಂಗಳೂರು ಕೇಂದ್ರ ಜಿಲ್ಲಾ ಘಟಕದ ಅಧ್ಯಕ್ಷ ಮಂಜುನಾಥ್ ಇದ್ದರು.

## ಬಿಜೆಪಿಯಿಂದ ಕಾಂಗ್ರೆಸ್‌ಗೆ ಪಕ್ಷಾಂತರ

**ಬೆಂಗಳೂರು: ಆರ್.ಆರ್. ನಗರ ಕ್ಷೇತ್ರದ ವ್ಯಾಪ್ತಿಯ ಲಗ್ಗೆರೆಯ ಬಿಜೆಪಿ ಮುಖಂಡ ಎಂ.ಎನ್. ಗಂಗಾಧರ್ ನೇತೃತ್ವದಲ್ಲಿ ಅವರ ಬೆಂಬಲಿಗರು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಸಮ್ಮುಖದಲ್ಲಿ ಭಾನುವಾರ ಕಾಂಗ್ರೆಸ್ ಸೇರಿದರು.**

**ಈ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕುಸುಮಾ ಮತ್ತು ಅವರ ತಂದೆ ಹನುಮಂತರಾಯಪ್ಪ ಕೂಡಾ ಇದ್ದರು.**

**ಅಹವಾಲು ಆಲಿಸಿದ ಡಿಕೆಶಿ: ಆರ್.ಆರ್. ನಗರದಲ್ಲಿ ಪಕ್ಷದ ಅಭ್ಯರ್ಥಿ ಜೊತೆ ಬಿರುಸಿನ ಚುನಾವಣಾ ಪ್ರಚಾರ ನಡೆಸಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ನಾಗರಬಾವಿಯ ಮಡಿವಾಳರ ಅಂಗಡಿಗೆ ಭೇಟಿ ನೀಡಿ ಅಂಗಡಿ ಮಾಲೀಕರೊಬ್ಬರ ಅಹವಾಲು ಆಲಿಸಿದರು.**

**'ಕೊರೊನಾ ಸಂಕಷ್ಟ ಸಂದರ್ಭದಲ್ಲಿ ಬಿಜೆಪಿ ಸರ್ಕಾರ ಘೋಷಿಸಿದ ಪರಿಹಾರದಲ್ಲಿ ಒಂದು ಪೈಸೆ ಕೂಡ ಸಿಕ್ಕಿಲ್ಲ. ಈ ಘೋಷಣೆ ಕೇವಲ ಘೋಷಣೆಯಾಗಿ ಉಳಿಯಿತು' ಎಂದು ಅಂಗಡಿ ಮಾಲೀಕ ನೋವು ತೋಡಿಕೊಂಡರು.**



ಸಿ.ಟಿ.ರವಿ ಹಾಗೂ ಮುನಿರತ್ನ ಸಮ್ಮುಖದಲ್ಲಿ ಜಿ.ಎಚ್.ರಾಮಚಂದ್ರ ಬಿಜೆಪಿಗೆ ಸೇರಿದರು

## ಜಿ.ಎಚ್. ರಾಮಚಂದ್ರ ಮರಳಿ ಬಿಜೆಪಿಗೆ

2018ರ ವಿಧಾನಸಭಾ ಚುನಾವಣೆಯಲ್ಲಿ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿದ್ದ ಜಿ.ಎಚ್. ರಾಮಚಂದ್ರ ಮರಳಿ ಬಿಜೆಪಿ ಸೇರಿದ್ದಾರೆ. ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಉಪಸ್ಥಿತಿಯಲ್ಲಿ ಅವರು ಭಾನುವಾರ ರಾತ್ರಿ ಮಾತೃ ಪಕ್ಷಕ್ಕೆ ಮರಳಿದರು.

ರಾಮಚಂದ್ರ ನಟಿ ಅಮೂಲ್ಯ ಅವರ ಮಾವ. ಈ ಹಿಂದೆ ಬಿಜೆಪಿಯಲ್ಲಿದ್ದು, ಮಹಾನಗರ ಪಾಲಿಕೆ ಸದಸ್ಯರೂ ಆಗಿದ್ದರು. 2018ರ ವಿಧಾನಸಭಾ ಚುನಾವಣೆಗೂ ಮೊದಲು ಬಿಜೆಪಿ ತೊರೆದು ಜೆಡಿಎಸ್ ಸೇರಿದ್ದರು. ನಟಿ ಅಮೂಲ್ಯ ಹಾಗೂ ಅವರ ಪತಿ ಕೂಡ ಜೆಡಿಎಸ್ ಸೇರಿದ್ದರು. ರಾಮಚಂದ್ರ ಅವರನ್ನು ಜೆಡಿಎಸ್ ರಾಜರಾಜೇಶ್ವರಿನಗರದಲ್ಲಿ ಕಣಕ್ಕಿಳಿಸಿತ್ತು. 60,360 ಮತಗಳನ್ನು ಗಳಿಸಿದ್ದ ಅವರು, ಮೂರನೇ ಸ್ಥಾನ ಪಡೆದಿದ್ದರು.

ರಾಮಚಂದ್ರ ಅವರ ಬೆಂಬಲಿಗರಲ್ಲಿ ಹಲವು ಮಂದಿ ಶನಿವಾರ ಮತ್ತು ಭಾನುವಾರ ಬೆಳಿಗ್ಗೆ ಬಿಜೆಪಿ ಸೇರಿದ್ದರು. ರಾತ್ರಿ ಸಿ.ಟಿ. ರವಿ ಅವರು ಖುದ್ದಾಗಿ ತೆರಳಿ ರಾಮಚಂದ್ರ ಅವರನ್ನು ಪಕ್ಷಕ್ಕೆ ಬರಮಾಡಿಕೊಂಡರು. ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಬಿಜೆಪಿ ಅಭ್ಯರ್ಥಿಯಾಗಿರುವ ಮುನಿರತ್ನ ಸೇರಿದಂತೆ ಹಲವು ಮುಖಂಡರು ಈ ಸಂದರ್ಭದಲ್ಲಿ ಇದ್ದರು.